ಪ್ರಸ್ತಾವನೆಯನ್ನು ತಿರಸ್ಕರಿಸಿದ್ದರಿಂದ ಸ್ತ್ರೀಶಕ್ತಿ ಗ್ರಾಮೀಣ ಬ್ಯಾಂಕ್‌ನ್ನು ಪ್ರಾರಂಭಿಸಿರುವುದಿಲ್ಲ.

ಊ) 2004–05ನೇ ಸಾಲಿನಲ್ಲಿ ಸ್ತ್ರೀಶಕ್ತಿ ಯೋಜನೆಗೆ ರೂ. 16.00 ಕೋಟಿ ನಿಗದಪಡಿಸಿದೆ.

ಋ) 1) ಸ್ತ್ರೀಶಕ್ತಿ ಗುಂಪುಗಳು ತಯಾರಿಸುವ 8 ಉತ್ಪನ್ನಗಳ ಬ್ರಾಂಡ್ ಬಿಡುಗಡೆ ಮಾಡಲಾಗಿದೆ.

2) ಜನತಾ ಬಜಾರ್ ಹಾಗೂ ನ್ಯಾಯಬೆಲೆ ಅಂಗಡಿಗಳ ಮೂಲಕ ಸ್ತ್ರೀಶಕ್ತಿ ಗುಂಪುಗಳ ಉತ್ಪನ್ನಗಳನ್ನು ಮಾರಾಟ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

3) ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ವಸ್ತು ಪ್ರದರ್ಶನ ಹಾಗೂ ಮಾರಾಟ ಮೇಳವನ್ನು ಏರ್ಪಡಿಸಲು ಪ್ರತಿ ಜಿಲ್ಲೆಗೆ ರೂ. 75000/– ಬಿಡುಗಡೆಗೊಳಿಸಲಾಗಿದೆ.

552(140) ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು (ಶಿವಾಜಿನಗರ) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ಎಷ್ಟು ಪಡಿತರ ಕಾರ್ಡುಗಳಿಗೆ ಪ್ರತಿ ತಿಂಗಳು ಸೀಮೆಎಣ್ಣೆ ವಿತರಿಸಲಾಗುತ್ತಿದೆ;

ಆ) ಸೀಮೆಎಣ್ಣೆ ವಿತರಣೆಯಲ್ಲಿ ಅಂದರೆ 8 ಲೀ.ಗೆ ಬದಲಿಗೆ ಪ್ರತಿ ಕಾರ್ಡಿಗೆ 7 ಲೀ. ವಿತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಬಡವರಿಗೆ ವಿತರಿಸುತ್ತಿರುವ ಸೀಮೆಎಣ್ಣೆಯಲ್ಲಿ ಆಗುತ್ತಿರುವ ವಂಚನೆಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಹೆಚ್.ಎಸ್. ಮಹದೇವಪ್ರಸಾದ್ (ಆಹಾರ ಮತ್ತು ನಾಗರೀಕ ಸರಬರಾಜ ಸಚಿವರು)

ಅ) ಬೆಂಗಳೂರು ನಗರದಲ್ಲಿ ಹಳದಿ, ಅಂತ್ಯೋದಯ ಎಪಿಎಲ್ ನಾನ್ ಗ್ಯಾಸ್‌ಗಳ ಒಟ್ಟು 681190 ಪಡಿತರ ಚೀಟಿಗಳಿಗೆ ಸೀಮೆಎಣ್ಣೆಯನ್ನು ವಿತರಿಸಲಾಗುತ್ತಿದೆ.

ಆ) 2004ರ ಮೇ, ಜೂನ್, ಆಗಸ್ಟ್ ತಿಂಗಳಲ್ಲಿ (ಅ.ಪ.) ಪ್ರದೇಶದ ಪ್ರತಿ ಪಡಿತರ ಚೀಟಿದಾರರಿಗೆ ತಲಾ 7 ಲೀ.ನಂತೆ ಸೀಮೆಎಣ್ಣೆ ವಿತರಣಾ ಪ್ರಮಾಣ ನಿಗದಿಪಡಿಸಿ ವಿತರಿಸಲಾಗಿದೆ. ಸೆಪ್ಟೆಂಬರ್ 2004ರ ಮಾಹೆಯಿಂದ ಎಲ್ಲಾ ವಿಧದ ಪಡಿತರ ಚೀಟಿಗಳಿಗೂ ತಲಾ 8 ಲೀ.ನಂತೆ ಸೀಮೆಎಣ್ಣೆ ವಿತರಿಸಲಾಗುತ್ತಿದೆ. ಸೀಮೆಎಣ್ಣೆಯ ಪ್ರಮಾಣವು ಕಾರ್ಡುಗಳ ಸಂಖ್ಯೆಗೆ ಅನುಗುಣವಾಗಿರುತ್ತದೆ.

ಇ) ಸೀಮೆಎಣ್ಣೆ ವಿತರಣೆಯಲ್ಲಿ ಲೋಪದೋಷಗಳನ್ನು ತಡೆಗಟ್ಟಲು ಇಲಾಖೆಯ ಅಧಿಕಾರಿಗಳು ತಪಾಸಣೆ ಕಾರ್ಯವನ್ನು ಕೈಗೊಂಡು ತಪ್ಪಿತಸ್ಥರ ವಿರುದ್ಧ ಕಾನೂನು ರೀತ್ಯ ಕ್ರಮವಹಿಸಿ, ಅಂತವರ ಪ್ರಾಧಿಕರಣವನ್ನು ರದ್ದು/ಅಮಾನತ್ತು ಪಡಿಸಲಾಗಿರುತ್ತದೆ.